ಮೂಡಬಿದ್ರಿಯಲ್ಲಿ ಮಹಿಳಾ ವೈದ್ಯಾಧಿಕಾರಿ ನೇಮಕಾತಿಯ ಬಗ್ಗೆ

2407 - ಶ್ರೀ ಕೆ. ಸೋಮಪ್ಪಸುವರ್ಣ (ಮೂಡಬಿದ್ರಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಮೂಡಬಿದ್ರಿಯ ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿಗಳ ನೇಮಕವಾಗದಿರಲು ಕಾರಣವೇನು?*

ಆ) *ಈ ಆಸ್ಪತ್ರೆಗೆ ಮಹಿಳಾ ವೈದ್ಯರಿಲ್ಲದ ಕಾರಣ 10 ಹಾಸಿಗೆಗಳುಳ್ಳ ಹೆರಿಗೆ ವಾರ್ಡಿನ ಪ್ರಯೋಜನ ಜನತೆಗೆ ಸಿಗಲಿಲ್ಲ ಎಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಮಹಿಳಾ ವೈದ್ಯ ನೇಮಕ ಮಾಡುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮವೇನು?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮಹಿಳಾ ವೈದ್ಯರ ಕೊರತೆಯಿಂದ

ಆ) ಇಲ್ಲ ಇಬ್ಬರು ಪುರುಷ ವೈದ್ಯರುಗಳು ಈ ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ಇ) ಆದಷ್ಟು ಶೀಘ್ರವಾಗಿ ಒಬ್ಬ ಮಹಿಳಾ ವೈದ್ಯರನ್ನು ಒಬ್ಬ ಪುರುಷ ವೈದ್ಯರ ಸ್ಥಾನದಲ್ಲಿ ಬದಲಾಯಿಸಲಾಗುವುದು.

ರಾಣೆಬೆನ್ನೂರು ಜನರಲ್ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು

2406 - ಶ್ರೀ ಕೆ.ಬಿ. ಕೋಳಿವಾಡ (ರಾಣೆಬೆನ್ನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ರಾಣೆಬೆನ್ನೂರು ಜನರಲ್ ಆಸ್ಪತ್ರೆಯನ್ನು 30 ಹಾಸಿಗೆಯಿಂದ 50 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲು ಮುಖ್ಯ ಮಂತ್ರಿಗಳು ಆಶ್ವಾಸನೆ ಕೊಟ್ಟಿರುವುದು ನಿಜವೇ?*

ಆ) *ಹಾಗಿದ್ದಲ್ಲಿ ಇದರ ಒಟ್ಟು ವೆಚ್ಚ ಎಷ್ಟು?*

ಇ) *ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ನಿಜ

ಆ) ಕಟ್ಟಡದ ಅಂದಾಜುವೆಚ್ಚ 12.80 ಲಕ್ಷ ರೂ.ಗಳು

ಇ) ಪರಿಸೀಲನೆಯಲ್ಲಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

2339 ಶ್ರೀ ಹಂಪನಗೌಡ (ಸಿಂಧನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *1990-91ನೇ ಸಾಲಿನಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರದ ಮುಂದೆ ಇರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು (ಜಿಲ್ಲಾ ಹಾಗೂ ತಾಲ್ಲೂಕುವಾರು ಅಂಕಿ ಅಂಶ ನೀಡುವುದು)*